# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 210 |
| ಸದಸ್ಯರ ಹೆಸರು | ಶ್ರೀ ಎನ್.ನಾಗರಾಜು (ಎಂ.ಟಿ.ಬಿ.) |
| ಉತ್ತರಿಸಬೇಕಾದ ದಿನಾಂಕ | 16.07.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನಲ್ಲಿ ಬರುವ ಸರ್ಕಾರಿ ಗೋಮಾಳ, ಕುಂಟೆ, ಕೆರೆಗಳಲ್ಲಿ ಅಕ್ರಮವಾಗಿ ಮರಳು ತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ತಾಲ್ಲೂಕು, ವ್ಯಾಪ್ತಿಯ ಸರ್ಕಾರಿ ಗೋಮಾಳ ಮತ್ತು ಕೆರೆ-ಕುಂಟೆ ಪ್ರದೇಶಗಳಲ್ಲಿ ಮರಳು ನಿಕ್ಷೇಪ ಲಭ್ಯವಿರುವುದಿಲ್ಲ.<br><br>ಸದರಿ ಪ್ರದೇಶಗಳಲ್ಲಿ ಮರಳು ನಿಕ್ಷೇಪ ಇಲ್ಲದಿರುವ ಕಾರಣ ಅನಧಿಕೃತ ಮರಳು ಗಣಿಗಾರಿಕೆ ಮತ್ತು ಅಂತಹವರ ಮೇಲೆ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಆ) | ಹಾಗಿದ್ದಲ್ಲಿ, ಅಂತವರ ಮೇಲೆ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | |
| ಇ) | ಅಕ್ರಮ ಮರಳುಗಾರಿಕೆಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮ ಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | • ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ. |

| | | |
|---|---|---|
| | | • ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43-A ರಂತೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಗೆ ದಂಡ ವಿಧಿಸಿ, ವಸೂಲು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ಮರಳು ಸಮಿತಿಯಿಂದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಮರಳು ಹಾಗೂ ಇತರೆ ಉಪಖನಿಜ ಸಾಗಾಣಿಕೆ ವಾಹನಗಳ ಚಲನವಲನಗಳ ಮೇಲೆ ನಿಗಾವಹಿಸಲು ಕೇಂದ್ರಿಕೃತ One state One GPS ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.<br>• ಮೇಲ್ಕಂಡಂತೆ, ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸುತ್ತಿರುವವರ ವಿರುದ್ಧ ಕ್ರಮ ವಹಿಸಲಾಗಿದ್ದು, ಕಳೆದ ಸಾಲಿನಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಯಡಿ 4076 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ₹1134.39 ಲಕ್ಷಗಳ ದಂಡ ಹಾಗೂ 1106 ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ.<br>ಜಿಲ್ಲಾವಾರು ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |

ಸಂಖ್ಯೆ ಸಿಐ-ಎಂಎಂಎನ್/151/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

ಎಸ್.ಎಸ್. ಮಲ್ಲಿಕಾರ್ಜುನ್
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು
ಹಾಗೂ ದಾವಣಗೆರೆ ಜಿಲ್ಲೆ ಉಸ್ತುವಾರಿ ಸಚಿವರು

ಅನುಬಂಧ-01

# 2023-24ನೇ ಸಾಲಿನ ಜಿಲ್ಲಾ ಮರಳು ಸಮಿತಿಯ ವಿವಿಧ ಇಲಾಖೆಗಳಿಂದ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಡಿ ಸಂಗ್ರಹಿಸಲಾಗಿರುವ ದಂಡದ ಮೊತ್ತ ಮತ್ತು ಮೊಕದ್ದಮೆ ದಾಖಲಿಸಿರುವ ವಿವರಗಳು

| ಕ್ರ. ಸಂ. | ಜಿಲ್ಲೆ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ FIR / CC |
|---|---|---|---|---|
| 1 | 2 | 3 | 4 | 5 |
| 1 | ಬೆಂಗಳೂರು ಗ್ರಾಮಾಂತರ | 0 | 0 | 0 |
| 2 | ಬೆಂಗಳೂರು ನಗರ | 1 | 0.46 | 0 |
| 3 | ತುಮಕೂರು | 26 | 3.92 | 12 |
| 4 | ಕೋಲಾರ | 18 | 4.87 | 0 |
| 5 | ಚಿಕ್ಕಬಳ್ಳಾಪುರ | 44 | 12.69 | 16 |
| 6 | ರಾಮನಗರ | 28 | 10.94 | 11 |
| 7 | ದಾವಣಗೆರೆ | 152 | 33.53 | 6 |
| 8 | ಚಿತ್ರದುರ್ಗ | 88 | 22.23 | 22 |
| 9 | ಶಿವಮೊಗ್ಗ | 310 | 104.71 | 3 |
| 10 | ಮೈಸೂರು | 35 | 2.62 | 21 |
| 11 | ಮಂಡ್ಯ | 29 | 2.9 | 17 |
| 12 | ಚಾಮರಾಜನಗರ | 15 | 3.58 | 0 |
| 13 | ಹಾಸನ | 76 | 17.31 | 40 |
| 14 | ದಕ್ಷಿಣ ಕನ್ನಡ | 296 | 179.72 | 33 |
| 15 | ಉಡುಪಿ | 204 | 46.4 | 3 |
| 16 | ಕೊಡಗು | 37 | 7.41 | 4 |
| 17 | ಚಿಕ್ಕಮಗಳೂರು | 55 | 5.47 | 32 |
| 18 | ಕಲಬುರಗಿ | 199 | 81.23 | 39 |
| 19 | ರಾಯಚೂರು | 568 | 56.82 | 403 |
| 20 | ಬೀದರ್ | 51 | 17.87 | 1 |
| 21 | ಬಳ್ಳಾರಿ | 61 | 10.39 | 0 |
| 22 | ಹೊಸಪೇಟೆ | 173 | 24.97 | 114 |
| 23 | ಯಾದಗಿರಿ | 163 | 18.83 | 113 |
| 24 | ಕೊಪ್ಪಳ | 431 | 121.71 | 99 |
| 25 | ಬೆಳಗಾಂ | 98 | 19.37 | 32 |
| 26 | ವಿಜಯಪುರ | 83 | 32.14 | 27 |
| 27 | ಧಾರವಾಡ | 47 | 16.8 | 0 |
| 28 | ಗದಗ | 243 | 119.49 | 37 |
| 29 | ಹಾವೇರಿ | 191 | 58.88 | 6 |
| 30 | ಬಾಗಲಕೋಟೆ | 229 | 49.68 | 11 |
| 31 | ಉತ್ತರ ಕನ್ನಡ | 125 | 47.45 | 4 |
| | ಒಟ್ಟು | 4076 | 1134.39 | 1106 |

CI - 151 - MMN - 2024

Deputy Director (Min. Admn)